ಇಲಾಖೆ / ವಿಷಯ: DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯ ಕರ್ನಾಟಕ ದಿನಾಂಕ : DATE : 4/12/19

# ಮಾಧುಸ್ವಾಮಿ ವಿರುದ್ಧ ಕೈ ದೂರು

## ಮತ ನೀಡದಿದ್ದರೆ ಬಿಎಸ್‌ವೈ ಕನ್ನೆಗೆ ಹೊಡೆದಂತೆ ಹೇಳಿಕೆ

**ವಿಕ ಸುದ್ದಿಲೋಕ** ಬೆಂಗಳೂರು

'ಲಿಂಗಾಯತ ಸಮುದಾಯ ಬಿಜೆಪಿಗೆ ಮತ ನೀಡದಿದ್ದರೆ ಯಡಿಯೂರಪ್ಪ ಅವರ ಕೆನ್ನೆಗೆ ಹೊಡೆದಂತೆ' ಎಂದು ಜಾತಿ ಆಧಾರದ ಮೇಲೆ ಮತಯಾಚಿಸಿರುವ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ.ಸಿ. ಮಾಧುಸ್ವಾಮಿ ವಿರುದ್ಧ ಕಾಂಗ್ರೆಸ್ ಪಕ್ಷ ಆಯೋಗಕ್ಕೆ ದೂರು ಸಲ್ಲಿಸಿದೆ.

ಈ ಸಂಬಂಧ ಮೇಲ್ಮನೆ ಸದಸ್ಯ ಪ್ರಕಾಶ್ ರಾಥೋಡ್ ನೇತೃತ್ವದ ಕಾಂಗ್ರೆಸ್ ನಿಯೋಗ ಮುಖ್ಯ ಚುನಾವಣಾಧಿಕಾರಿಯನ್ನು ಭೇಟಿ ಮಾಡಿ ಮನವಿ ಪತ್ರ ಸಲ್ಲಿಸಿತು.

''ಧರ್ಮ ಮತ್ತು ಜಾತಿ ಆಧಾರದ ಮೇಲೆ ಮತ ಯಾಚಿಸುವುದು ಕಾನೂನುಬಾಹಿರ. ಆದರೆ, ಕಾನೂನು ಸಚಿವ ಎಂಬುವನ್ನೂ ಮರೆತು ಮಾಧುಸ್ವಾಮಿ ಅವರು ವಿಜಯನಗರ ವಿಧಾನಸಭಾ ಕ್ಷೇತ್ರದಲ್ಲಿ ಸೋಮವಾರ ಜಾತಿ ಆಧಾರದಲ್ಲಿ ಮತ ಯಾಚಿಸಿದ್ದು, ಗಂಭೀರವಾಗಿ ಪರಿಗಣಿಸಿ ಕಾನೂನು ಕ್ರಮ ಜರುಗಿಸಬೇಕು'' ಎಂದು ಕಾಂಗ್ರೆಸ್ ನಿಯೋಗ ಆಗ್ರಹಿಸಿತು.